ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತಾರನೆಯ ಅಧಿವೇಶನ

ಮಂಗಳವಾರ, ದಿನಾಂಕ: ೯ನೇ ಡಿಸೆಂಬರ್, ೨೦೧೪

---

## ಸಮೂಹ – II

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ಒಣಗಿ ನಿಂತಿರುವ ತೆಂಗಿನ ತೋಟಗಳು

**ಶ್ರೀ ಸಿ.ಹೆಚ್. ವಿಜಯ ಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೦೧ (೨೩೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಬೆಂಗಳೂರು ಮಧ್ಯದಲ್ಲಿರುವ ಬಹುತೇಕ ಪ್ರದೇಶಗಳಲ್ಲಿ ನೂರಾರು ವರ್ಷಗಳಿಂದ ಬೆಳೆದು ನಿಂತಿರುವ ತೆಂಗಿನ ತೋಟಗಳು ಇತ್ತೀಚಿನ ದಿನಗಳಲ್ಲಿ ಒಣಗಿ ನಿಂತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ತೋಟಗಳು ಒಣಗುತ್ತಿರಲು ಕಾರಣಗಳೇನು, ಒಣಗಿ ಹೋಗುತ್ತಿರುವ ತೋಟಗಳನ್ನು ಉಳಿಸಿಕೊಳ್ಳಲು ಇದುವರೆಗೆ ಇಲಾಖೆ ತನ್ನ ವ್ಯಾಪ್ತಿಯಲ್ಲಿ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಈ ರೀತಿ ಒಣಗಿಹೋಗಿರುವ ತೆಂಗಿನ ತೋಟದ ಮಾಲೀಕರಿಗೆ ಸಕಾಲದಲ್ಲಿ ಸೂಕ್ತ ಪರಿಹಾರ ನೀಡಲು ಹಾಗೂ ಪರ್ಯಾಯ ವ್ಯವಸ್ಥೆಗೆ ಇಲಾಖೆ ಗಮನ ಹರಿಸಿದೆಯೇ ? (ಹಾಗಿದ್ದಲ್ಲಿ, ವಿವರಗಳನ್ನು ಒದಗಿಸುವುದು)

## ಜಲಾನಯನ ಅಭಿವೃದ್ಧಿ ಕಾಮಗಾರಿಗಳು

**ಶ್ರೀ ವೀರಕುಮಾರ್ ಅಪ್ಪಾಸೋ ಪಾಟೀಲ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

೦೨ (೨೮೭) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ೨ ವರ್ಷಗಳ ಜಲಾನಯನ ಅಭಿವೃದ್ಧಿ ಇಲಾಖೆ ವತಿಯಿಂದ ಕೈಗೊಂಡ ಕಾಮಗಾರಿಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಾದರೆ ಈ ಅವಧಿಯಲ್ಲಿ ಕೈಗೊಂಡ ಕಾಮಗಾರಿಗಳು ಎಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಪೂರ್ಣಗೊಂಡ ಹಾಗೂ ಅಪೂರ್ಣಗೊಂಡ ಕಾಮಗಾರಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಹಾಗಿದ್ದಲ್ಲಿ, ಅಂತರ್ಜಲ ಹೆಚ್ಚಿಸುವ ಸಲುವಾಗಿ ಹಾಲಿ ಇರುವ ಹಾಗೂ ಹೊಸ ಯೋಜನೆಗಳು ಯಾವುವು ? (ವಿವರ ನೀಡುವುದು)

## ಅಡಿಕೆ ಬೆಳೆಗಾರರಿಗೆ ಮೂಲಭೂತ ಸೌಕರ್ಯಗಳು

**ಶ್ರೀ ಐವನ್ ಡಿ'ಸೋಜಾ** (ನಾಮನಿರ್ದೇಶನ ಹೊಂದಿದವರು) –

೦೩ (೨೧೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಡಿಕೆ ಬೆಳೆಗಾರರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು "ಅಡಿಕೆ ಬೆಳೆಗಾರರ ಮಂಡಳಿ ರಚನೆ" ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; (ವಿವರ ನೀಡುವುದು)

(ಆ) ಅಡಿಕೆ ಮರಗಳಿಗೆ ಕೊಳೆ ರೋಗ ಮತ್ತು ಇನ್ನಿತರ ಬೆಳೆ ನಷ್ಟ ಉಂಟಾದಾಗ ಪರಿಹಾರವನ್ನು ಒದಗಿಸಲು ರಾಜ್ಯ ಸರ್ಕಾರದ ಆವರ್ತ ನಿಧಿಯನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ಚಿಂತನೆ ಮಾಡಿದೆಯೇ ;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಹೆಕ್ಟೇರ್ (ವಿಸ್ತೀರ್ಣ)ಗಳಲ್ಲಿ ಅಡಿಕೆ ಕೃಷಿಯನ್ನು ಬೆಳೆಸಲಾಗುತ್ತಿದೆ ; (ವಿವರ ನೀಡುವುದು)

(ಈ) ಕ್ಯಾಂಪ್ಕೋ ಸಂಸ್ಥೆಯು ರಾಜ್ಯದ ಅಡಿಕೆ ಬೆಳೆಗಾರರಿಗೆ ನೀಡುತ್ತಿರುವ ಪ್ರೋತ್ಸಾಹದ ಬಗ್ಗೆ ವಿವರ ನೀಡುವುದು ?

## ನೋಡಲ್ ಕೇಂದ್ರಗಳ ಸ್ಥಾಪನೆ :
## ರೈತರಿಗೆ ಕೃಷಿ ಪರಿಕರಗಳ ವಿತರಣೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪ (೨೬೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೋಡಲ್ ಕೇಂದ್ರಗಳನ್ನು ತೆರೆದು ರೈತರಿಗೆ ಅವಶ್ಯಕತೆ ಇರುವ ಎಲ್ಲಾ ಕೃಷಿ ಸಲಕರಣೆ ಮತ್ತು ಯಂತ್ರೋಪಕರಣ (ಟ್ರಾಕ್ಟರ್, ಕೊಯ್ಲು ಯಂತ್ರ ಹಾಗೂ ಇತರೆ ಕೃಷಿ ಯಂತ್ರಗಳು) ಗಳನ್ನು ಬಾಡಿಗೆ ರೂಪದಲ್ಲಿ ನೀಡಲಾಗುತ್ತದೆ ಎಂಬ ಸರ್ಕಾರದ ಆಲೋಚನೆ ಯಾವ ಹಂತದಲ್ಲಿದೆ ;

(ಆ) ಸರ್ಕಾರ ರೈತರಿಗೆ ಸಬ್ಸಿಡಿ ದರದಲ್ಲಿ ನೀಡಲಾಗುತ್ತಿರುವ ಕೃಷಿ ಸಲಕರಣೆಗಳು ಯಾವುವು ; ಇದರಿಂದ ರೈತರಿಗೆ ಆಗುವ ಉಪಯೋಗಗಳಾವುವು ; (ವಿವರಣೆಯೊಂದಿಗೆ)

(ಇ) ರಾಜ್ಯದಲ್ಲಿ ಕೃಷಿ ನೀತಿಯನ್ನು ಜಾರಿಗೆ ತರಲಾಗಿದೆಯೇ ; ತರದಿದ್ದಲ್ಲಿ, ಅದಕ್ಕೆ ಕಾರಣವೇನು ?

## ಲೋಕೋಪಯೋಗಿ ರಸ್ತೆಗಳ ದುರಸ್ಥಿ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೦೫ (೧೮೧) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ರಸ್ತೆಗಳಲ್ಲಿ ಹಾಳಾಗಿರುವ ಸೇತುವೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ವರ್ಷ ದುರಸ್ತಿಗೆ ಕೈಗೆತ್ತಿಕೊಂಡಿರುವ ಸೇತುವೆ ಕಾಮಗಾರಿಗಳು ಯಾವುವು ;

(ಇ) ಬಾಕಿ ಉಳಿದಿರುವ ಸೇತುವೆ ದುರಸ್ತಿ ಕಾಮಗಾರಿಗಳನ್ನು ಯಾವಾಗ ನಿರ್ವಹಿಸಲಾಗುವುದು ?

## "ಹನಿ ನೀರಾವರಿ ಪದ್ಧತಿ"

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೦೬ (೨೮೩) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡಿರುವ ಫಲಾನುಭವಿಗಳು ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡ ರೈತರಿಗೆ ಸರ್ಕಾರದಿಂದ ಸಿಗುವ ಪ್ರೋತ್ಸಾಹಧನ ಎಷ್ಟು ;

(ಇ) ಎಷ್ಟು ಫಲಾನುಭವಿಗಳಿಗೆ ಸಹಾಯಧನ ದೊರಕಿದೆ ; ಇನ್ನೂ ಎಷ್ಟು ಫಲಾನುಭವಿಗಳಿಗೆ ಸಹಾಯಧನ ದೊರಕಬೇಕಾಗಿದೆ ; ಈ ವಿಳಂಬಕ್ಕೆ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಕೇಂದ್ರ ಸರ್ಕಾರದಿಂದ ಬರಬೇಕಾದ ಸಹಾಯಧನ ಬಂದಿದ್ದರೂ ಸಹ ಇಲ್ಲಿಯವರೆಗೂ ಫಲಾನುಭವಿಗಳಿಗೆ ಸಹಾಯಧನ ನೀಡದೇ ಇರುವುದಕ್ಕೆ ಕಾರಣಗಳೇನು ?

## ಖಾರ್ಗಾ–ಕಡಿಯಾ ಗ್ರಾಮಗಳಿಗೆ ಸಂಪರ್ಕ ಸೇತುವೆ ನಿರ್ಮಾಣ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೦೭ (೧೮೫೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲ್ಲೂಕಿನ ಖಾರ್ಗಾ ಮತ್ತು ಕಡಿಯಾ ಗ್ರಾಮಗಳ ಮಧ್ಯೆ ಕೇವಲ ೪೦ ಅಡಿ ಉದ್ದದ ಸೇತುವೆ ನಿರ್ಮಾಣ ಮಾಡಿದರೆ, ಈ ಗ್ರಾಮಗಳ ೧೩ ಕಿ.ಮೀ. ಸಂಚಾರ ದೂರ ಕಡಿಮೆಯಾಗಿ ಸಾರ್ವಜನಿಕರಿಗೆ ಅನುಕೂಲವಾಗುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ;

(ಆ) ಕಳೆದ ೬೦ ವರ್ಷಗಳಿಂದ ಲೋಕೋಪಯೋಗಿ ಇಲಾಖೆಯ ದಿವ್ಯ ನಿರ್ಲಕ್ಷ್ಯತನದಿಂದ ಇಲ್ಲಿಯವರೆಗೆ ಜನಸಾಮಾನ್ಯರಿಗೆ ಸೇತುವೆ ನಿರ್ಮಾಣವಾಗದೇ ತೊಂದರೆಯಾಗುತ್ತಿರುವುದನ್ನು ಹೋಗಲಾಡಿಸಲು ಈಗಲಾದರೂ ಸರ್ಕಾರ ಸೇತುವೆ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಅನಧಿಕೃತ ವಿದ್ಯುತ್ ಸಂಪರ್ಕ

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮ (೨೭೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷಗಳಿಂದ ರಾಜ್ಯದಲ್ಲಿ ಪತ್ತೆಯಾಗಿರುವ ವಿದ್ಯುತ್ ಕಳವು ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಅಂಕಿ–ಅಂಶಗಳನ್ನು ನೀಡುವುದು)

(ಆ) ಈ ವಿದ್ಯುತ್ ಕಳವು ಪ್ರಕರಣಗಳಲ್ಲಿ ಖಾಸಗಿ ಸಂಸ್ಥೆಗಳು ಮತ್ತು ವ್ಯಕ್ತಿಗಳ ಹೆಸರುಗಳ ವಿವರಗಳನ್ನು ಹಾಗೂ ಎಷ್ಟು ಪ್ರಮಾಣದಲ್ಲಿ ಕಳವಾಗಿರುವುದನ್ನು ಪತ್ತೆ ಮಾಡಲಾಗಿದೆ ; ಇದರಿಂದ ಸರಬರಾಜು ಕಂಪನಿಗಳಿಗೆ ಆಗಿರುವ ನಷ್ಟವೆಷ್ಟು ; ವಿದ್ಯುತ್ ಕಳ್ಳತನದಲ್ಲಿ ಭಾಗಿಯಾಗಿರುವ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಈ ವಿದ್ಯುತ್ ಸೋರಿಕೆಯಾಗುವುದನ್ನು ತಡೆಗಟ್ಟಲು ಸರ್ಕಾರವು ಹಮ್ಮಿಕೊಂಡಿರುವ ಯೋಜನೆಗಳಾವುವು ?

## ರೈತರ ಪಂಪ್‌ಸೆಟ್‌ಗಳಿಗೆ ಸೋಲಾರ್ ವಿದ್ಯುತ್

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯ (೩೦೫) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರಿಗೆ ರಿಯಾಯಿತಿ ದರದಲ್ಲಿ ಸೋಲಾರ್ ವಿದ್ಯುತ್ ಚಾಲಿತ ಪಂಪ್‌ಸೆಟ್‌ಗಳನ್ನು ಒದಗಿಸುವ ಯೋಜನೆ ಸರ್ಕಾರದ ಮುಂದಿದೆಯೇ, ಇದ್ದರೆ ಎಷ್ಟು ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳನ್ನು ಎಷ್ಟೆಷ್ಟು ರಿಯಾಯಿತಿ ದರದಲ್ಲಿ ಪೂರೈಸಲಾಗುವುದು ;

(ಆ) ಇಲ್ಲದಿದ್ದರೆ, ಕನಿಷ್ಟಪಕ್ಷ ಬಿಸಿಲು ಹೆಚ್ಚಾಗಿರುವ ರಾಯಚೂರು, ಕಲಬುರ್ಗಿ, ಬಿಜಾಪುರ, ಬಾಗಲಕೋಟೆ ಬಳ್ಳಾರಿ ಜಿಲ್ಲೆಗಳಲ್ಲಾದರೂ ಪ್ರಾಯೋಗಿಕವಾಗಿ ಒದಗಿಸಲು ಸಾಧ್ಯವೇ ?

**ಸಹಕಾರ ಸಂಘ ಹಾಗೂ ಬ್ಯಾಂಕುಗಳಿಂದ ಕೃಷಿ ಸಾಲ**

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೧೦ (೨೭೯) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸಹಕಾರ ಸಂಘ ಹಾಗೂ ಬ್ಯಾಂಕುಗಳಿಂದ ದಿನಾಂಕ: ೦೧.೦೪.೨೦೧೩ ರಿಂದ ೩೧.೦೩.೨೦೧೪ ಹಾಗೂ ೦೧.೦೪.೨೦೧೪ ರಿಂದ ೩೦.೦೯.೨೦೧೪ರ ಅವಧಿಯಲ್ಲಿ ಶೂನ್ಯ ಬಡ್ಡಿ ದರದಲ್ಲಿ ಕೃಷಿ ಸಾಲ ಪಡೆದು, ಸಾಲ ತೀರುವಳಿ ಮಾಡಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; ಸಾಲದ ಒಟ್ಟು ಮೊತ್ತವೆಷ್ಟು ; (ಪೂರ್ಣ ವಿವರಗಳೊಂದಿಗೆ)

(ಆ) ಸಾಲ ತೀರುವಳಿ ಮಾಡಿರುವ ಫಲಾನುಭವಿಗಳಿಗೆ ಶೂನ್ಯ ಬಡ್ಡಿ ಸಂಬಂಧ ಸರ್ಕಾರ ಪಾವತಿಸಬೇಕಾಗಿರುವ ಬಡ್ಡಿಯ ಒಟ್ಟು ಮೊತ್ತವೆಷ್ಟು ;

(ಇ) ಇದುವರೆವಿಗೂ ಈ ಸಂಬಂಧ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; (ವಿವರಗಳೊಂದಿಗೆ)

(ಈ) ಸದರಿ ಮೊತ್ತ ಬಿಡುಗಡೆ ಮಾಡುವಲ್ಲಿ ವಿಳಂಬವುಂಟಾಗಿರುವುದರಿಂದ ಸಹಕಾರಿ ಸಂಘಗಳು ಹಾಗೂ ಬ್ಯಾಂಕುಗಳು ನಷ್ಟ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಶಿರಾಡಿಘಾಟಿನ ರಸ್ತೆ ದುರಸ್ತಿ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೧ (೬) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರಾವಳಿ ಜಿಲ್ಲೆಗಳನ್ನು ಸಂಪರ್ಕಿಸುವ ಪ್ರಮುಖ ರಾಷ್ಟ್ರೀಯ ಹೆದ್ದಾರಿ ಹಾದು ಹೋಗುವ ಶಿರಾಡಿ ಘಾಟಿನ ಸುಮಾರು ೪೦ ಕಿ.ಮೀ. ರಸ್ತೆ ಕಳೆದ ಸುಮಾರು ೧೦ ವರ್ಷಗಳಿಂದ ದುರಸ್ತಿಯಲ್ಲಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ರಸ್ತೆಯ ದುರಸ್ತಿಗೆ ಇದುವರೆಗೆ ಸರ್ಕಾರ ಎಷ್ಟು ವೆಚ್ಚ ಮಾಡಿದೆ ; ಇದರಿಂದ ಎಷ್ಟು ಕಿ.ಮೀ. ರಸ್ತೆ ಸಂಚಾರಕ್ಕೆ ಯೋಗ್ಯವಾಗಿದೆ ;

(ಆ) ಪತ್ರಿಕೆ ಮತ್ತು ಮಾಧ್ಯಮಗಳಲ್ಲಿ ಈ ಬಗ್ಗೆ ಕಾಲಕಾಲಕ್ಕೆ ಸುರಂಗ ಮಾರ್ಗ, ಕಾಂಕ್ರೀಟ್ ರಸ್ತೆ ಚತುಷ್ಪಥ ರಸ್ತೆ ಜಪಾನ್ ಸಹಭಾಗಿತ್ವ ಹಾಗೂ ಇನ್ನಿತರ ಸಂಗತಿಗಳು ವರದಿಯಾಗುತ್ತಿದ್ದು, ಈ ಕುರಿತು ಸರ್ಕಾರ ಯಾವ ನಿರ್ಣಯ ಕೈಗೊಂಡಿದೆ ; (ಮಾಹಿತಿಯನ್ನು ನೀಡುವುದು)

(ಇ) ರಸ್ತೆ ದುರಸ್ತಿಗೆ ಅಥವಾ ಮರು ನಿರ್ಮಾಣಕ್ಕೆ ಒಂದು ಕಾಲಮಿತಿಯೊಳಗೆ ಸ್ಪಷ್ಟ ಪರಿಹಾರ ಒದಗಿಸಲು ಏನು ಕ್ರಮ ಕೈಗೊಳ್ಳಲಾಗುವುದು ;

(ಈ) ಕಳೆದ ಜನವರಿಯಲ್ಲಿ ರಸ್ತೆ ದುರಸ್ತಿಯಾಗಿರುವ ಬಗ್ಗೆ ಪತ್ರಿಕೆಗಳಲ್ಲಿ ವರದಿಯಾಗಿದ್ದು, ಕೇವಲ ಒಂದೇ ಮಳೆಗಾಲದಲ್ಲಿ ಸದರಿ ರಸ್ತೆಯು ಸಂಪೂರ್ಣವಾಗಿ ಹಾಳಾಗಿರುವುದು ರಸ್ತೆ ದುರಸ್ತಿಯಾಗಿರುವ ಬಗ್ಗೆ ಸಂಶಯವನ್ನುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಬಗ್ಗೆ ತೀರಾ ಕಳಪೆ ಕಾಮಗಾರಿ ಮಾಡಿರುವ ಗುತ್ತಿಗೆದಾರರು ಮತ್ತು ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಸ್ತೆಗಳ ಮಾರ್ಜಿನ್ ಒತ್ತುವರಿ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೧೨ (೬೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳ ರಸ್ತೆ ಮಾರ್ಜಿನ್‌ನಲ್ಲಿ ರಾಜ್ಯದಾದ್ಯಂತ ಕಟ್ಟಡಗಳಿಂದ ಮತ್ತು ಇತರೆ ಅಂಶಗಳಿಂದ ಒತ್ತುವರಿ ಆಗುತ್ತಿರುವುದು ನಿಜವೇ ;

(ಆ) ನಿಜವಾಗಿದ್ದರೆ, ಈ ವಿಷಯದಲ್ಲಿ ಅಧಿಕಾರಿಗಳ ಹೊಣೆಗಾರಿಕೆ ನಿಗದಿ ಮಾಡಲಾಗಿದೆಯೇ ; ಅಂತಹವರ ವಿರುದ್ಧ ಕಾನೂನು ರೀತಿ ಕ್ರಮ ತೆಗೆದುಕೊಳ್ಳಲಾಗಿದೆಯೆ ; (ವಿವರ ನೀಡುವುದು)

(ಇ) ಮುಖ್ಯವಾಗಿ ಪಟ್ಟಣಗಳ ಹೊರಗೆ ಬೈಪಾಸ್ ರಸ್ತೆ ನಿರ್ಮಿಸಿರುವ ಕಡೆಯೂ ಅನಧಿಕೃತ ಕಟ್ಟಡ ಮತ್ತು ಒತ್ತುವರಿ ಆಗುತ್ತಿರುವುದು ನಿಜವಲ್ಲವೇ ;

(ಈ) ಇದ್ದಲ್ಲಿ, ಅಂತಹ ರಸ್ತೆಗಳ ಮಾರ್ಜಿನ್‌ನನ್ನು ಕಾಪಾಡುವುದು ಸರ್ಕಾರದ ಕರ್ತವ್ಯವಲ್ಲವೇ, ಇದಕ್ಕೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಕಬ್ಬು ಬೆಳೆಗಾರರಿಗೆ ಕಾರ್ಖಾನೆಗಳಿಂದ ಬರಬೇಕಾದ ಬಾಕಿ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೧೩. (೨೮೪) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳಿಂದ ರಾಜ್ಯದ ಸಕ್ಕರೆ ಕಾರ್ಖಾನೆಗಳಿಂದ ಕಬ್ಬು ಬೆಳೆಗಾರರಿಗೆ ಬರಬೇಕಾದ ಬಾಕಿ ಹಣ ಎಷ್ಟು ;

(ಆ) ಯಾವ ಯಾವ ಸಕ್ಕರೆ ಕಾರ್ಖಾನೆಗಳಿಂದ ಯಾವ ಯಾವ ದರ ನಿಗದಿಯಾಗಿದ್ದು ಕಬ್ಬು ಬೆಳೆಗಾರರಿಗೆ ಎಷ್ಟು ವರ್ಷಗಳಿಂದ ಎಷ್ಟು ಬಾಕಿ ಹಣ ಬರಬೇಕಿದೆ ;

(ಇ) ಸದರಿ ಬಾಕಿ ಹಣವನ್ನು ರೈತರಿಗೆ ಕೊಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಸಕ್ಕರೆ ಕಾರ್ಖಾನೆಗಳು ಬಾಕಿ ಪಾವತಿಸಲು ತಡವಾದಲ್ಲಿ ಅಥವಾ ವಿಫಲವಾದಲ್ಲಿ ಅದರ ಹೊಣೆಯನ್ನು ಸರ್ಕಾರ ಭರಿಸಲಿದೆಯೆ ? (ವಿವರ ನೀಡುವುದು)

## ಅಗತ್ಯ ಪ್ರಮಾಣದಷ್ಟು ವಿದ್ಯುತ್ ಟ್ರಾನ್ಸ್‌ಫಾರ್ಮರ್‌ಗಳ ಪೂರೈಕೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೧೪ (೧೦೪) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆ, ಮೂಡಿಗೆರೆ ತಾಲ್ಲೂಕಿನಲ್ಲಿ ಟ್ರಾನ್ಸ್‌ಫಾರ್ಮರ್‌ಗಳ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಒಂದು ವರ್ಷದಿಂದ ಟ್ರಾನ್ಸ್‌ಫಾರ್ಮರ್‌ಗಳ ಬೇಡಿಕೆಗಾಗಿ ಬಂದಿರುವ ಅರ್ಜಿಗಳೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಇ) ಇದರಲ್ಲಿ ಸರ್ಕಾರ ಒದಗಿಸಿರುವ ಟ್ರಾನ್ಸ್‌ಫಾರ್ಮರ್‌ಗಳು ಎಷ್ಟು ;

(ಈ) ಇನ್ನೂ ಬಾಕಿ ನೀಡಬೇಕಾಗಿರುವ ಟ್ರಾನ್ಸ್‌ಫಾರ್ಮರ್‌ಗಳು ಎಷ್ಟು ; ಯಾವಾಗ ನೀಡಲಾಗುವುದು ?

## ನೌಕರರನ್ನು ಖಾಯಂ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೫ (೩೧೯) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತ (ಕ್ರೆಡಲ್) ಸಂಸ್ಥೆಯಲ್ಲಿ ಗುತ್ತಿಗೆಯಡಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂ ಮಾಡುವ ಸಂಬಂಧ ಸಿ & ಆರ್ ನಿಯಮ ೩.೮ ರಲ್ಲಿನ ಒಳಗೊಳ್ಳುವಿಕೆಯ ಅವಧಿಯನ್ನು ೨ ವರ್ಷದಿಂದ ೧ ವರ್ಷಕ್ಕೆ ಇಳಿಸಿ ಸರ್ಕಾರ ಅನುಮೋದನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆದೇಶದ ಪ್ರತಿ ನೀಡುವುದು ;

(ಆ) ಸರ್ಕಾರ ಅನುಮೋದನೆ ನೀಡಿದ ನಂತರ ಸಂಸ್ಥೆಯು ದಿನಾಂಕ: ೨೮.೦೭.೨೦೦೬ ರಂದು ೩೧ ಜನ ಮತ್ತು ದಿ: ೦೭.೦೮.೨೦೦೬ ರಂದು ಇಬ್ಬರು ಒಟ್ಟು ೩೩ ಜನರನ್ನು ಕಂಪನಿಯ ಸೇವೆಯಲ್ಲಿ ವಿಲೀನಗೊಳಿಸಿ ಕಛೇರಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಎರಡೂ ಆದೇಶಗಳ ಪ್ರತಿ ನೀಡುವುದು)

(ಇ) ಈ ರೀತಿ ಖಾಯಂ ಮಾಡುವಾಗ ಕೆಲವೊಂದು ಅರ್ಹ ಅಭ್ಯರ್ಥಿಗಳನ್ನು ಪರಿಗಣಿಸದಿರುವುದು ನಿಜವೇ ; ಇದ್ದಲ್ಲಿ, ಅವರಿಗೆ ಯಾವ ರೀತಿ ನ್ಯಾಯ ಒದಗಿಸಲಾಗುವುದು ;

(ಈ) ಇಬ್ಬರು ಅಭ್ಯರ್ಥಿಗಳು ದಿ: ೦೫.೦೭.೨೦೦೫ ರಂದು ಒಂದೇ ದಿನ ಸಂಸ್ಥೆಗೆ ಕೆಲಸಕ್ಕೆ ಸೇರಿರುತ್ತಾರೆ ; ಅನುಮೋದಿತ ಹುದ್ದೆ ಇಲ್ಲದಿದ್ದರೂ ವಯೋಮಿತಿ ಮೀರಿದ್ದರೂ ಒಬ್ಬರನ್ನು ಖಾಯಂ ಮಾಡಿ ಇನ್ನೊಬ್ಬರನ್ನು ಅನುಮೋದಿತ ಜೂನಿಯರ್ ಇಂಜಿನಿಯರ್ ಹುದ್ದೆ ಇದ್ದಾಗ್ಯೂ ಕೂಡ ಖಾಯಂ ಮಾಡದೆ ತಾರತಮ್ಯ ಮಾಡಲಾಗಿದೆ ; (ಇದರ ಸಂಬಂಧ ಮಾಹಿತಿ ನೀಡುವುದು)

(ಉ) ೩೩ ಜನ ನೌಕರರನ್ನು ಗುತ್ತಿಗೆಯಡಿ ಖಾಯಂ ಮಾಡಿ ಕೆಲವೊಂದು ಅರ್ಹ ನೌಕರರನ್ನು ಖಾಯಂ ಮಾಡದೆ ಪಟ್ಟಿಯಿಂದ ಕೈಬಿಡಲಾಗಿದೆ ಇದರ ಸಂಬಂಧ ನೊಂದ ನೌಕರರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ

ದಾವೆ (ಡಬ್ಲ್ಯೂಪಿ. ನಂ. ೧೫೪೭೯–೧೫೪೮೩/೨೦೦೮) ಹೂಡಿದ್ದು ಮಾನ್ಯ ನ್ಯಾಯಾಲಯವು ಕೂಡ ೩೩ ಜನರ ಜೊತೆಯಲ್ಲಿಯೇ ಇವರನ್ನು ಖಾಯಂ ಮಾಡಲು ಆದೇಶ ನೀಡಿರುತ್ತದೆ. ಆದರೆ ಶ್ರೀಮತಿ ಉಮಾದೇವಿ ಪ್ರಕರಣದ ಅನ್ವಯ ಖಾಯಂ ಮಾಡಲು ಆಗುವುದಿಲ್ಲ ಎಂದು ತಿಳಿಸಲಾಗಿದೆ. ಹಾಗಾದರೆ, ಉಮಾದೇವಿ ಪ್ರಕರಣ ಖಾಯಂಗೊಂಡ ೩೩ ಜನರಿಗೆ ಅನ್ವಯವಾಗುವುದಿಲ್ಲವೇ ; ಕೇವಲ ಅರ್ಜಿದಾರರಿಗೆ ಮಾತ್ರ ಅನ್ವಯವಾಗುತ್ತದೆಯೇ ? (ಸ್ಪಷ್ಟೀಕರಣ ನೀಡುವುದು)

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 831 – ಪಿ5